ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
ಅಂತರ್ಜಾಲ : www.kptcl.com

ಇ-ಮೇಲ್ ವಿಳಾಸ :director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.

ಸಂಖ್ಯೆ: ಕವಿಪ್ರನಿನಿ/ಬಿ22/86937/2018-19

ದಿನಾಂಕ 13 DEC 2018

## ಸುತ್ತೋಲೆ

ವಿಷಯ: ನಿಗಮದ / ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ನೌಕರರುಗಳ ವಿರುದ್ಧ ಅನಾಮಧೇಯ ಹಾಗೂ ಮಿಥ್ಯನಾಮಧೇಯ ದೂರು ಅರ್ಜಿಗಳನ್ನು ಸ್ವೀಕರಿಸುತ್ತಿರುವ ಕುರಿತು.

*****

ನಿಗಮದ ಹಾಗೂ ವಿದ್ಯುತ್ ಸರಬರಾಜು ಕಂಪನಿಗಳ ಕಚೇರಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ನೌಕರರುಗಳ ವಿರುದ್ಧ ಪ್ರಮುಖವಾಗಿ ಈ ಕೆಳಕಂಡ ಆರೋಪಗಳನ್ನೊಳಗೊಂಡ ಹಾಗೂ ಇತರೆ ಹಲವಾರು ಸ್ವರೂಪದ ಅನಾಮಧೇಯ ಹಾಗೂ ಮಿಥ್ಯನಾಮಧೇಯ ದೂರು ಅರ್ಜಿಗಳನ್ನು ನಿರಂತರವಾಗಿ ಸ್ವೀಕರಿಸಲಾಗುತ್ತಿರುತ್ತದೆ;

1. ಅಧಿಕಾರದ ದುರ್ಬಳಕೆ
2. ಕೆಲಸಗಳ ಅಸಮರ್ಪಕ ನಿರ್ವಹಣೆ
3. ಕೆಲಸಗಳನ್ನು ನಿಗದಿತ ಅವಧಿಯಲ್ಲಿ ಪೂರೈಸದಿರುವುದು
4. ಸಾರ್ವಜನಿಕರು ಮತ್ತು ಸಿಬ್ಬಂದಿಗಳೊಡನೆ ಅನುಚಿತ ವರ್ತನೆ
5. ಮಹಿಳಾ ನೌಕರರಿಗೆ ಲೈಂಗಿಕ ಕಿರುಕುಳ
6. ಆಯ್ದ ಹಲವು ವಿದ್ಯುತ್ ಗುತ್ತಿಗೆದಾರರುಗಳಿಗೆ ಮತ್ತು ಸಿಬ್ಬಂದಿಗಳಿಗೆ ಪಕ್ಷಪಾತ ಮಾಡುವ ಬಗ್ಗೆ
7. ಸ್ವಜನ ಪಕ್ಷಪಾತ
8. ಭ್ರಷ್ಟಾಚಾರ

ಕವಿಪ್ರನಿನಿ ಹಾಗೂ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರುಗಳು ಸಾರ್ವಜನಿಕ ನೌಕರರಾಗಿದ್ದು, ತಮ್ಮ ದಿನ ನಿತ್ಯದ ಕೆಲಸಗಳಲ್ಲಿ ಸಾರ್ವಜನಿಕರೊಡನೆ ವ್ಯವಹರಿಸಬೇಕಾಗಿರುತ್ತದೆ. ಆದ್ದರಿಂದ ಸಾರ್ವಜನಿಕ ಕಚೇರಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ನೌಕರರುಗಳು ಅತ್ಯುನ್ನತ ಮಟ್ಟದ ಶಿಸ್ತನ್ನು ಪಾಲಿಸುವುದರೊಂದಿಗೆ ಕಚೇರಿಯಲ್ಲಿ ಒಳ್ಳೆಯ ನಡತೆಯನ್ನು ಪಾಲಿಸುವುದು ಸಹ ಆದ್ಯ ಕರ್ತವ್ಯವಾಗಿರುತ್ತದೆ. ಆದ್ದರಿಂದ ನಿಗಮ / ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳು ತಮ್ಮ ದಿನ ನಿತ್ಯದ ಕರ್ತವ್ಯವನ್ನು ನಿಗದಿತ ಸಮಯದಲ್ಲಿ ಸಮರ್ಪಕವಾಗಿ ನಿಭಾಯಿಸುವುದರೊಂದಿಗೆ ಎಲ್ಲಾ ಸಮಯದಲ್ಲಿಯೂ ಸಹ ಸಾರ್ವಜನಿಕರಿಗೆ ಒಳ್ಳೆಯ ಗುಣಮಟ್ಟದ ಸೇವೆಯನ್ನು ಒದಗಿಸಲು ಬದ್ಧರಾಗಿ ಕಾರ್ಯನಿರ್ವಹಿಸಲು ಹಾಗೂ ಸಾರ್ವಜನಿಕರಿಂದ ದೂರುಗಳಿಗೆ ಆಸ್ಪದ ನೀಡದಂತೆ ಕಾರ್ಯ ನಿರ್ವಹಿಸಲು ಈ ಮೂಲಕ ಸೂಚಿಸಲಾಗಿದೆ.

ಮುಂದುವರೆದಂತೆ, ಕವಿಪ್ರನಿನಿ ಹಾಗೂ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ನಿಯಂತ್ರಣ ಪ್ರಾಧಿಕಾರಿಗಳು ತಮ್ಮ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ / ನೌಕರರುಗಳಿಗೆ ಈ ಸುತ್ತೋಲೆಯಲ್ಲಿ ತಿಳಿಸಿರುವ ಅಂಶಗಳನ್ನು ಗಮನದಲ್ಲಿರಿಸಿಕೊಂಡು ಕಾರ್ಯ ನಿರ್ವಹಿಸಲು ಸಲಹೆ ನೀಡಲು ಸೂಚಿಸಲಾಗಿದೆ.

Gopalle

ನಿರ್ದೇಶಕರು (~~ಆ ಮತ್ತು ಮಾ~~.ಸಂ)
ಕವಿಪ್ರನಿನಿ

ಗೆ,

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ ಜೆಸ್ಕಾಂ/ ಹೆಸ್ಕಾಂ/ ಮೆಸ್ಕಾಂ/ ಸೆಸ್ಕ್/ ಹಿಸಿಕೆಎಲ್.
2. ಎಲ್ಲಾ ನಿರ್ದೇಶಕರು (ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ / ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ / ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು / ನಿರ್ದೇಶಕರು (ಹಣಕಾಸು)/ ನಿರ್ದೇಶಕರು (ಪ್ರಸರಣ) / ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ) / ಕಂಪನಿ ಕಾರ್ಯದರ್ಶಿ, ಕವಿಪ್ರನಿನಿ.

   www.kptcl.com/eprasarana for information.

6. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ) / ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ / ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) / ಉಪ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ / ಎಸ್ಕಾಂಗಳು.

<u>ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-</u>

1. ಶ್ರೀ.ಟಿ.ಆರ್ ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋ.ಸಂ–659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಮತ್ತು ಎಲ್ಲಾ ಎಸ್ಕಾಂಗಳು.
2. ಶ್ರೀ.ಎ.ಎನ್ ಜಯರಾಜ್, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಮತ್ತು ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ, ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೊಮಾ ಇಂಜಿನಿಯರುಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಧಿಕಾರಿಗಳ ಸಂಘ, ಬೆಂಗಳೂರು.